## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43-ಎ ರನ್ವಯ ಕ್ರಮ ಜರುಗಿಸುವ ಬಗ್ಗೆ.

---

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಪತ್ರ ಸಂಖ್ಯೆ:ಬೆಂಗ್ರಾಜಿಪಂ/ಪಶಾ/ಸಿಆರ್/41/2013-14 ದಿನಾಂಕ:10-02-2015 ಮತ್ತು 16-03-2015.
2. ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂ:ಗ್ರಾಅಪ:ಗ್ರಾಮೂಸೌ:14 ದಿನಾಂಕ:15-11-2014.
3. ಸರ್ಕಾರದ ಕಾರಣ ಕೇಳುವ ನೋಟೀಸು ಸಂಖ್ಯೆ :ಗ್ರಾಅಪ 179 ಗ್ರಾಪಂಕಾ 2014 ದಿನಾಂಕ:01-01-2016
4. ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ದಿನಾಂಕ:20-01-2016 ರ ಲಿಖಿತ ಹೇಳಿಕೆ.
5. ಸರ್ಕಾರದ ವಿಚಾರಣಾ ನೋಟೀಸ್ ಸಂಖ್ಯೆ:179 ಗ್ರಾಪಂಕಾ 2014 ದಿನಾಂಕ 06.02.2016 ಮತ್ತು 13-07-2017.
6. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ನಡವಳಿ ಸಂಖ್ಯೆ:ಬೆಂಗ್ರಾಜಿಪಂ/ಸಿ.6/ಸಿಸಿಎ/9/2014-15 ದಿನಾಂಕ:17-12-2015.
7. ಮಾನ್ಯ ಉಚ್ಚನ್ಯಾಯಾಲಯದ ಪ್ರಕರಣ ಸಂಖ್ಯೆ:16856/2000 ಗೆ ಸಂಬಂಧಿಸಿದಂತೆ ಈರಗಂಟಪ್ಪ ಅಲಿಯಾಸ್ ವೀರಗಂಟಪ್ಪ ವಿರುದ್ಧ ಹನುಮಂತೆ ಮತ್ತು ಇತರರು 2003(6) Kar.LJ.342(DB)ILR 2003 Kar.3035(DB)

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಶ್ರೀ ಆಂಜನಮೂರ್ತಿ. ಬಿ. ರಾಜ್ಯಾಧ್ಯಕ್ಷರು, ಕರ್ನಾಟಕ ದಲಿತ ಶಿಕ್ಷಣ ಸಂಘಟನೆ ಹೋರಾಟ (ರಿ.) ರವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ ನೆಲಮಂಗಲ ತಾಲ್ಲೂಕು, ಬಸವನಹಳ್ಳಿ ಗ್ರಾಮ ಪಂಚಾಯತಿಯ ಲೋಹಿತ್ ನಗರ ಗ್ರಾಮದ ವ್ಯಾಪ್ತಿಯಲ್ಲಿ ಖಾತೆ ನಂ. 691/ಎ ನಲ್ಲಿ ಫೈರೋಜ್ ಬಾನು ಕೋಂ ಮಹಮ್ಮದ್ ಮದರ್ ಎಂಬುವವರು ಗ್ರಾಮ ಪಂಚಾಯತಿಯಿಂದ ಯಾವುದೇ ಪರವಾನಿಗೆಯನ್ನು ಪಡೆಯದೆ, ಅನಧಿಕೃತವಾಗಿ ಕರ್ನಾಟಕ ಫಂಕ್ಷನ್ ಹಾಲ್ ಎಂಬ ಮದುವೆ ಛತ್ರವನ್ನು ನಿರ್ಮಿಸಿ ನಡೆಸುತ್ತಿದ್ದು, ಗ್ರಾಮ ಪಂಚಾಯತಿಯಿಂದ ಎನ್.ಓ.ಸಿ. ಪಡೆಯಲು ವಿದ್ಯುತ್ ಸಂಪರ್ಕ ಪಡೆದಿದ್ದು, ಸರ್ಕಾರಕ್ಕೆ ಲಕ್ಷಾಂತರ ರೂಪಾಯಿಗಳ ತೆರಿಗೆ ವಂಚನೆ ಮಾಡಿರುವುದಾಗಿ ಸರ್ಕಾರಕ್ಕೆ ದೂರು ಸಲ್ಲಿಸಿದ ಮೇರೆಗೆ ಸದರಿ ವಿಚಾರವಾಗಿ ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ತನಿಖೆ ನಡೆಸಿ ಸರ್ಕಾರಕ್ಕೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ಸದರಿ ವರದಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ನೆಲಮಂಗಲ ರವರ ವರದಿ ಅನ್ವಯ ಬಸವನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಲೋಹಿತ್ ಗರದ ಸರ್ವೇ ನಂ.77/3ರಲ್ಲಿ ಗರುಡಯ್ಯ ಬಿನ್ ಕೋಟೆ ಹನುಮಯ್ಯ ರವರು ವಾಸದ ಉದ್ದೇಶಕ್ಕಾಗಿ ಜಿಲ್ಲಾಧಿಕಾರಿಗಳಿಂದ 1 ಎಕರೆ ಜಮೀನನ್ನು ಪರಿವರ್ತನೆ ಮಾಡಿಸಿಕೊಂಡಿದ್ದು, ಈ ಪೈಕಿ ಖಾತಾ ಸಂ.691/1ಎ, 691/2ಬಿ, 691/ಸಿ ಮತ್ತು 691/1ಡಿ ಯಲ್ಲಿ

ಮಹಮದ್ ಮದರ್ ಬಿನ್ ಮಹಮದ್ ವೇರ್ ಸಾಬ್ ಮತ್ತು ಫ್ಯಾರೋಜ್ ಜಾನು ಕೋಂ ಮಹಮದ್ ಮದರ್ ರವರು ಖರೀದಿಸಿ ಗ್ರಾಮ ಪಂಚಾಯತಿಯಿಂದ ದಿನಾಂಕ:26-08-2008 ರಂದು ನಕ್ಷೆಯನ್ನು ಗ್ರಾಮ ಪಂಚಾಯತಿಯಿಂದ ಅನುಮೋದನೆ ಪಡೆದು ನಿರ್ಮಾಣ ಮಾಡಿರುತ್ತಾರೆ. ಆದರೆ ಸಂಬಂಧಿಸಿದ ಪ್ರಾಧಿಕಾರದಿಂದ ಅನುಮೋದನೆ ಮಾಡಿಸಿರುವುದಿಲ್ಲ. ಮೇಲ್ಕಾಣಿಸಿದ ಖಾತೆ ನಂ.ಗಳನ್ನು ಒಗ್ಗೂಡಿಸದೆ ಸಂಬಂಧಿಸಿದ ಪ್ರಾಧಿಕಾರದಿಂದ ಅನುಮೋದನೆ ಪಡೆಯದೇ ಬಸವನಹಳ್ಳಿ ಅಂದಿನ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀ ಬಿ.ಎನ್. ಕೃಪಾನಂದ ಹಾಗೂ ಕಾರ್ಯದರ್ಶಿ ಶ್ರೀ ಕೆ.ಬಿ.ದಿವಾಕರಯ್ಯ ಇವರುಗಳು ನಕ್ಷೆಯನ್ನು ಅನುಮೋದನೆ ನೀಡುವ ಮೂಲಕ ಕಾನೂನು ಉಲ್ಲಂಘಿಸಿರುತ್ತಾರೆ. ಸದರಿ ಗ್ರಾಮ ಪಂಚಾಯತಿಯಿಂದ ನಿರ್ಮಾಣಕ್ಕೆ ಪರವಾನಿಗೆ ನೀಡುವ ಬಗ್ಗೆ ದಾಖಲೆ ಇರುವುದಿಲ್ಲ. ದಿನಾಂಕ:21-11-2011 ರಲ್ಲಿ ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಲ್ಲಯ್ಯ(ನಿಧನ ಹೊಂದಿರುತ್ತಾರೆ) ಇವರು ವಿದ್ಯುತ್ ಪಡೆಯಲು ದೃಢೀಕರಣ ಪತ್ರ ನೀಡಿರುತ್ತಾರೆ. ಸದರಿ ಕಟ್ಟಡವನ್ನು ನಿರ್ಮಿಸಲು 640 ಚ.ಮೀ.ಗೆ ಪಂಚಾಯತಿಯಿಂದ ಅನುಮೋದನೆ ಪಡೆದಿರುವುದಾಗಿ ನಿರ್ಮಾಣ ಮಾಡಿರುವುದು 665 ಚ.ಮೀ.ಎಂದು ವರದಿ ಮಾಡಲಾಗಿದೆ. ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43-ಎ ರನ್ವಯ ಕ್ರಮ ಜರುಗಿಸುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕುವ ಬಗ್ಗೆ ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿ 20-01-2016 ರಂದು ಲಿಖಿತ ಹೇಳಿಕೆಯನ್ನು ಈ ಕೆಳಕಂಡಂತೆ ನೀಡಿರುತ್ತಾರೆ.

ಈ ಹಿಂದೆಯೇ ಅಂದರೆ ನಾನು ಅಧ್ಯಕ್ಷನಾಗುವ ಪೂರ್ವದಲ್ಲಿ ಅಂದರೆ 1998-2000 ರವರೆಗೆ ಅಂದಿನ ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಸಂಬಂಧಿಸಿದ ಬಡಾವಣೆ ನಕ್ಷೆಗೆ ಸಹಿ ಮಾಡಿರುತ್ತಾರೆ. ಶ್ರೀಮತಿ ಫೈರೋಜ್‌ಬಾನು ಕೋಂ ಮಹಮದ್ ಮದರ್, ಇವರ ನಿವೇಶನದ ನಕಾಶೆಗೆ ಮಂಜೂರಾತಿ ನೀಡಿ ಸಹಿ ಮಾಡಿರುತ್ತಾರೆ. ಗ್ರಾಮ ಪಂಚಾಯಿತಿ ಕಾರ್ಯದರ್ಶಿಯಾಗಿದ್ದ ಶ್ರೀ ಕೆ.ಟಿ.ದಿವಾಕರಯ್ಯ, ಇವರು ಈ ನಕಾಶೆಯನ್ನು ಮತ್ತೆ ನನ್ನ ಗಮನಕ್ಕೆ ತಂದು ಅನುಮೋದನೆ ನೀಡಬಹುದೇ ಎಂಬ ಟಿಪ್ಪಣಿಯನ್ನು ಒಪ್ಪಿಸಿರುತ್ತಾರೆ. ಗ್ರಾಮ ಪಂಚಾಯಿತಿ ಕಟ್ಟಡಗಳಿಗೆ ಸಂಬಂಧಿಸಿದ ನಿಯಮಗಳು ಮತ್ತು ನಿಬಂಧನೆಗಳನ್ನು ಟಿಪ್ಪಣಿಯಲ್ಲಿ ನಮೂದಿಸದೆ ಹಾಗೂ ಸೂಕ್ತ ಮಾರ್ಗದರ್ಶನ ನೀಡದೆ, ನನ್ನ ಅನುಮೋದನೆಗೆ ಒಪ್ಪಿಸಿದ್ದರು. ಪಂಚಾಯಿತಿಯ ಚುನಾಯಿತ ಸದಸ್ಯರಿಗೆ ನಿಯಮಗಳ ಬಗ್ಗೆ ಸೂಕ್ತ ತರಬೇತಿ ನೀಡದಿದ್ದ ಕಾರಣ ಹಾಗೂ ನಿಯಮಗಳ ತಿಳುವಳಿಕೆ ಇಲ್ಲದ ಕಾರಣ ಈಗಾಗಲೇ ಹಿಂದಿನ ಅವಧಿಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ನಕಾಶೆಯ ಮೇಲೆ ಸಹಿ ಮಾಡಿ ಅನುಮೋದನೆ ನೀಡಿದ್ದ ನಕಾಶೆಯಲ್ಲಿ ಕಮ್ಯುನಿಟಿ ಹಾಲ್, ಮದುವೆ ಮನೆ ಮತ್ತು ದೇವಸ್ಥಾನ ಎಂದು ನಮೂದಿಸಿದ್ದ ಕಾರಣಗಳ ಹಿನ್ನೆಲೆಯಲ್ಲಿ ನಾನು ಅಧ್ಯಕ್ಷನಾಗಿ ಅದೇ ನಕಾಶೆಗೆ ನಾನು ಸಹ ಮಾಡಿರುತ್ತೇನೆ. ಆದರೆ ಈ ನಿವೇಶನದಲ್ಲಿನ ಕಟ್ಟಡದ ನಿರ್ಮಾಣಕ್ಕೆ ಸಂಬಂಧಿಸಿದ ಪರವಾನಿಗೆ ಅಥವಾ ನಿರಾಕ್ಷೇಪಣೆ ಪತ್ರದ ಪ್ರಸ್ತಾವನೆಯನ್ನು ಗ್ರಾಮ ಪಂಚಾಯಿತಿಗೆ ನಾನು ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಪ್ರಸ್ತಾವನೆ ಮಂಡಿಸಿರುವುದಿಲ್ಲ. ನಾನು ಈ ಕಟ್ಟಡದ ನಿರ್ಮಾಣಕ್ಕೆ ಪರವಾನಿಗೆ ನೀಡಿರುವುದಿಲ್ಲ. ನಾನು ಯಾವುದೇ ಕರ್ತವ್ಯಲೋಪ ಮಾಡಿರುವುದಿಲ್ಲ. ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಯವರು ಸರಿಯಾದ ಮಾರ್ಗದರ್ಶನ ನೀಡದ ಕಾರಣ ಮತ್ತು ನಿಯಮಗಳನ್ನು ಟಿಪ್ಪಣಿಯಲ್ಲಿ ನಮೂದಿಸಿರದ ಕಾರಣ ನಾನು ಈ ಹಿಂದೆಯೇ ಗ್ರಾಮ ಪಂಚಾಯಿತಿಯಿಂದ ಅನುಮೋದನೆಗೊಂಡಿದ್ದ ನಕಾಶೆಯ ಮೇಲೆ ಸಹಿ ಮಾಡಿರುತ್ತೇನೆ. ಇದರಿಂದಾಗಿ ಗ್ರಾಮ ಪಂಚಾಯಿತಿಗೆ ಯಾವುದೇ ಆರ್ಥಿಕ ನಷ್ಟವಾಗಿಲ್ಲ ಅಥವಾ ಅಧಿಕಾರ ದುರುಪಯೋಗವಾಗಿಲ್ಲ. ಈ ಕಾರಣಗಳಿಂದ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43ಎ ರಡಿ ನನ್ನ ಮೇಲೆ ಕ್ರಮ ಕೈಗೊಳ್ಳುವ ಉದ್ದೇಶವನ್ನು ಕೈಬಿಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (5) ರನ್ವಯ ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ವಿಚಾರಣೆ ಕರೆಯಲಾಗಿ ಸರ್ಕಾರವು ದಿನಾಂಕ:01-01-2016 ರಂದು ನೀಡಿರುವ ಕಾರಣ ಕೇಳುವ ನೋಟೀಸಿಗೆ ಮತ್ತು ದಿನಾಂಕ:06-02-2016 ರ ವಿಚಾರಣಾ ತಿಳುವಳಿಕೆ ಪತ್ರಕ್ಕೆ ~~ಮಾನ್ಯ ಉಚ್ಚ ನ್ಯಾಯಾಲಯದಿಂದ ಮಧ್ಯಂತರ ತಡೆಯಾಜ್ಞೆ ತಂದಿರುತ್ತಾರೆ. ಮಧ್ಯಂತರ ತಡೆಯಾಜ್ಞೆಯನ್ನು~~ ತೆರವುಗೊಳಿಸಲು ದಿನಾಂಕ:07-04-2016 ರಂದು ಹೆಚ್ಚುವರಿ ಸರ್ಕಾರಿ ವಕೀಲರು ಕರ್ನಾಟಕ ಉಚ್ಚನ್ಯಾಯಾಲಯ ಬೆಂಗಳೂರು ರವರಿಗೆ Statement Of Objections ಅನ್ನು ಸಲ್ಲಿಸಲಾಗಿತ್ತು. ದಿನಾಂಕ:28-06-2016 ರಂದು ಸರ್ಕಾರದ ಅಧೀನ ಕಾರ್ಯದರ್ಶಿ, ಪಂಚಾಯತ್ ರಾಜ್ ರವರು ತಡೆಯಾಜ್ಞೆ ತೆರವುಗೊಳಿಸಲು ಮತ್ತು **Statement Of Objections** ಅನ್ನು ಅಫಿಡವಿಟ್ ಮೂಲಕ ಸ್ವೇರ್ ಮಾಡಿದ್ದು, ಶ್ರೀ ಕೃಪಾನಂದ, ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ 8988/2016ರ ಪ್ರಕರಣವು ಮುಕ್ತಾಯಗೊಂಡಿದ್ದು, ಸರ್ಕಾರವು ವಿಚಾರಣೆಯನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)ರಡಿ ಮುಂದುವರೆಸುವಂತೆ ನಿರ್ದೇಶನ ನೀಡಿರುತ್ತದೆ.

ದಿನಾಂಕ 24-07-2017 ರಂದು ಜರುಗಿದ ವಿಚಾರಣೆಯಲ್ಲಿ ಆಪಾದಿತ ಸದಸ್ಯರು, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಸವನಹಳ್ಳಿ ಗ್ರಾಮ ಪಂಚಾಯತಿ, ಮುಖ್ಯ ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ನೆಲಮಂಗಲ ರವರು ಹಾಜರಾಗಿರುತ್ತಾರೆ. ಅಧ್ಯಕ್ಷರು ತಮ್ಮ ಹೇಳಿಕೆಯನ್ನು ನೀಡಿರುತ್ತಾರೆ.

ಮೇಲೆ ಓದಲಾದ (6) ರಲ್ಲಿ ಶ್ರೀ ಕೆ.ಟಿ.ದಿವಾಕರಯ್ಯ, ಹಿಂದಿನ ಕಾರ್ಯದರ್ಶಿ,ಬಸವನಹಳ್ಳಿ ಗ್ರಾಮ ಪಂಚಾಯತಿ ಹಾಲಿ ಪಂಚಾಯತಿ ಅಭಿವೃದ್ಧಿ ಅದಿಕಾರಿ, ಶ್ರೀನಿವಾಸಪುರ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು ಇವರ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಸದರಿ ನೌಕರರಿಗೆ ಒಂದು ವಾರ್ಷಿಕ ಬಡ್ತಿಯನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರವರ ಪ್ರಸ್ತಾವನೆಗಳು, ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ನೀಡಿರುವ ಲಿಖಿತ ಹೇಳಿಕೆ, ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ತನಿಖಾ ವರದಿಯನ್ನು ಪರಿಶೀಲಿಸಲಾಗಿ, ಓದಲಾದ (7) ರ ಮಾನ್ಯ ಉಚ್ಚನ್ಯಾಯಾಲಯದ ಆದೇಶದಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಅನ್ವಯ ಸದಸ್ಯನು ಪ್ರಸ್ತುತ ಅವಧಿಯಲ್ಲಿ ತನ್ನ ಕರ್ತವ್ಯಗಳನ್ನು ನಿರ್ವಹಿಸುತ್ತಿರುವಾಗ ಎಸಗಿದ ದುರ್ನಡತೆಗೆ ಮಾತ್ರ ಕ್ರಮ ಕೈಗೊಳ್ಳಬಹುದಾಗಿರುತ್ತದೆ. ಈ ಪ್ರಕರಣದಲ್ಲಿ ಶ್ರೀ ಬಿ.ಎನ್. ಕೃಪಾನಂದನವರ ವಿರುದ್ಧ ಇರುವ ಆರೋಪವು ಹಿಂದಿನ ಗ್ರಾಮ ಪಂಚಾಯತಿಯ ಸದಸ್ಯತ್ವದ ಅವಧಿಗೆ ಸಂಬಂಧಿಸಿದ್ದು ಹಾಗೂ ಸದರಿ ಸದಸ್ಯರಿಂದ ಹಣ ದುರುಪಯೋಗವಾಗಿರುವುದು ಕಂಡುಬಂದಿರದಿಂದ ಅವರಿಗೆ "ಎಚ್ಚರಿಕೆ" ನೀಡಲು ಮತ್ತು ಈ ಸಂಬಂಧ ಆರ್ಥಿಕ ನಷ್ಟ ಉಂಟು ಮಾಡಿದ ಸಂಬಂಧಪಟ್ಟವರ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಂಡು ಸರ್ಕಾರಕ್ಕೆ ಉಂಟಾದ ನಷ್ಟ ಮೊತ್ತವನ್ನು ಬಡ್ಡಿ ಸಮೇತ ವಸೂಲು ಮಾಡಲು ತೀರ್ಮಾನಿಸಿದೆ.

ಅದರಂತೆ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 587 ಗ್ರಾಪಂಅ 2017,

**ಬೆಂಗಳೂರು, ದಿನಾಂಕ: 19-05-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ; ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಹೇಳಿಕೆ ಹಾಗೂ ಮೌಖಿಕ ವಿಚಾರಣೆಯ ಹಾಗೂ ಮಾನ್ಯ ಉಚ್ಛನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಗೆ ಎಚ್ಚರಿಕೆಯನ್ನು ನೀಡಿ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ಪ್ರಕರಣ 43(ಎ) ರಡಿ ಪ್ರಾರಂಭಿಸಲಾದ ವಿಚಾರಣೆಯನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ. ಈ ಪ್ರಕರಣದಲ್ಲಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದ ಸಂಬಂಧಪಟ್ಟವರ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಂಡು ಸರ್ಕಾರಕ್ಕೆ ಉಂಟಾದ ನಷ್ಟದ ಮೊತ್ತವನ್ನು ಬಡ್ಡಿ ಸಮೇತ ವಸೂಲು ಮಾಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/5/18

**(ಮುಬಾರಕ್ ಅಹ್ಮದ್),**
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
2. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
3. ಶ್ರೀ ಬಿ.ಎನ್. ಕೃಪಾನಂದ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಸವನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5. ಗಣಕ ಶಾಖೆ/ಕರ್ನಾಟಕ ವಿಕಾಸ
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.